ಸೌಕರ್ಯ ಅಲ್ಲಿ ಆಗುತ್ತದೆ. ನೇರವಾಗಿ ವಿಶ್ವವಿದ್ಯಾಲಯ ಮೇಲ್ವಿಚಾರಣೆಯಲ್ಲಿ ನಡೆಯುವುದರಿಂದ ಅವರಿಗೂ ಆ ವಿಶ್ವವಿದ್ಯಾಲಯದ ಘಟಕ ಸಂಸ್ಥೆಗಳು ಬೇರೆ ಬೇರೆ ಕಡೆ ಇದ್ದ ಹಾಗಾಗುತ್ತದೆಂದು ಮಾಡುತ್ತಾರೆ. ಇನ್ನು, ಹೆಚ್ಚಿಗೆ ವೈವಿಧ್ಯಮಯ ಕೋರ್ಸುಗಳು ಆಗಬೇಕೆಂದು ಹೇಳಿದರು. Wait for one or two years. stabilize ಆಗಲೆಂದು ಕಾಯುತ್ತಿದ್ದೇವೆ. ಈಗಿರುವ ಕೋರ್ಸುಗಳಾದ, Electronics, Mechanical, Computer stabilize ಆದ ಕೂಡಲೇ ಅದನ್ನೂ ಮಾಡುತ್ತೇವೆ.

ಉದ್ಯೋಗ ಖಾತ್ರಿ ಯೋಜನೆಗೆ ಹಣ ಬಿಡುಗಡೆ

22 (314) ಶ್ರೀ ಪಾಟೀಲ್ ವಿ.ಎಸ್. (ಯಲ್ಲಾಪುರ) :– ಮಾನ್ಯ ಗ್ರಾಮೀಣಾಭಿವೃದ್ಧಿ, ಪಂಚಾಯತ್ ರಾಜ್ ಇಲಾಖೆ, ಗ್ರಾಮೀಣ ನೀರು ಸರಬರಾಜು ಮತ್ತು ನೈರ್ಮಲ್ಯ ಸಚಿವರು ದಯೆಯಿಟ್ಟು ಈ ಕೆಳಕಂಡ ಪ್ರಶ್ನೆಗಳಿಗೆ ಉತ್ತರಿಸುವರೆ:–

(ಅ) ಯಲ್ಲಾಪುರ ಮತ್ತು ಮುಂಡಗೋಡ ತಾಲ್ಲೂಕಿನ ಮಹಾತ್ಮ ಗಾಂಧಿ ಉದ್ಯೋಗ ಖಾತ್ರಿ ಯೋಜನೆ ಕಾಮಗಾರಿಗಳಿಗೆ ಹಣ ಬಿಡುಗಡೆ ಮಾಡಲು ವಿಳಂಬ ಮಾಡುತ್ತಿರುವುದು ಸರ್ಕಾರಕ್ಕೆ ಬಂದಿದೆಯೇ;

(ಆ) ಹಾಗಿದ್ದಲ್ಲಿ, ಹಣ ಬಿಡುಗಡೆ ಮಾಡದಿರುವುದರಿಂದ ಉದ್ಯೋಗ ಖಾತ್ರಿ ಕಾಮಗಾರಿ ಪ್ರಗತಿಯಾಗದೆ ಕೂಲಿಕಾರರಿಗೆ ತೊಂದರೆಯಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ?

ಶ್ರೀ ಜಗದೀಶ್ ಶೆಟ್ಟರ್: ಮಾನ್ಯ ಗ್ರಾಮೀಣಾಭಿವೃದ್ಧಿ, ಪಂಚಾಯತ್ ರಾಜ್ ಇಲಾಖೆ, ಗ್ರಾಮೀಣ ನೀರು ಸರಬರಾಜು ಮತ್ತು ನೈರ್ಮಲ್ಯ ಸಚಿವರು:

(ಅ) ಉತ್ತರ ಕನ್ನಡ ಜಿಲ್ಲೆಯ ಯಲ್ಲಾಪುರ ಮತ್ತು ಮುಂಡಗೋಡ ತಾಲ್ಲೂಕು ಪಂಚಾಯಿತಿಗಳ ವ್ಯಾಪ್ತಿಯ ಗ್ರಾಮ ಪಂಚಾಯಿತಿಗಳಿಗೆ ಬೇಡಿಕೆ ಮತ್ತು ಪ್ರಗತಿಯನ್ನು ಆಧರಿಸಿ ಅನುದಾನವನ್ನು ಸಕಾಲದಲ್ಲಿ ಯಾವುದೇ ವಿಳಂಬವಿಲ್ಲದೆ ಬಿಡುಗಡೆ ಮಾಡಲಾಗುತ್ತಿದೆ.

(ಆ) ಉದ್ಭವಿಸುವುದಿಲ್ಲ.

ಶ್ರೀ ವಿ.ಎಸ್. ಪಾಟೀಲ್: ನೇಮಕಾತಿಯಲ್ಲಿ ನಮಗೆ ಎಲ್ಲಾ ಪಂಚಾಯಿತಿಯಲ್ಲಿ minus ತೋರಿಸಿದ್ದಾರೆ. ಆದಷ್ಟು ಹೆಚ್ಚು ಹಣವನ್ನು ಜಮಾ ಮಾಡಬೇಕೆಂದು ಕೇಳುತ್ತೇನೆ.

ಶ್ರೀ ಜಗದೀಶ್ ಶೆಟ್ಟರ್: ಯಲ್ಲಾಪುರ ಮತ್ತು ಮುಂಡಗೋಡ ತಾಲ್ಲೂಕುಗಳಿಗೆ ಸಂಬಂಧಪಟ್ಟಂತೆ ಪ್ರಶ್ನೆ ಕೇಳಿದ್ದಾರೆ. ಅದಕ್ಕೆ ಹಣ ಬಿಡುಗಡೆ ಮಾಡದೇ ಇರುವುದರಿಂದ ಈ ಉದ್ಯೋಗ ಖಾತ್ರಿ ಕಾಮಗಾರಿ ಪ್ರಗತಿಯಾಗದೆ ಕೂಲಿ ಕಾರ್ಮಿಕರಿಗೆ ತೊಂದರೆಯಾಗಿದೆ ಎಂದು ಹೇಳಿದ್ದಾರೆ. ಅದರ ಬಗ್ಗೆ ಈಗಾಗಲೇ ನಮ್ಮ ಅಧಿಕಾರಿಗಳು ಅಲ್ಲಿ ಎಷ್ಟು ಕೆಲಸ ಆಗಿದೆ ಎನ್ನುವುದನ್ನು ಪರಿಶೀಲನೆ ಮಾಡಿ ಹಣ ಬಿಡುಗಡೆ ಮಾಡುವ ಕ್ರಮ ಕೈಗೊಂಡಿದ್ದಾರೆ.

23 (137) ಶ್ರೀ ಲಾಲಾಜಿ ಆರ್. ಮೆಂಡನ್ (ಕಾಪು) ಇವರು ಗೈರು ಹಾಜರಾಗಿದ್ದರು.

ಭದ್ರಾವತಿ ಕ್ಷೇತ್ರಕ್ಕೆ ನಾಲ್ಕು ಪ್ರೌಢಶಾಲೆ ಮಂಜೂರಾತಿ

24 (310) ಶ್ರೀ ಸಂಗಮೇಶ್ವರ ಬಿ.ಕೆ (ಭದ್ರಾವತಿ) :– ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಸಚಿವರು ದಯೆಯಿಟ್ಟು ಈ ಕೆಳಕಂಡ ಪ್ರಶ್ನೆಗಳಿಗೆ ಉತ್ತರಿಸುವರೆ:–

(ಅ) ಭದ್ರಾವತಿ ವಿಧಾನಸಭಾ ಕ್ಷೇತ್ರದ ಗ್ರಾಮಾಂತರ ಪ್ರದೇಶಗಳಲ್ಲಿ ನಾಲ್ಕು ಸರ್ಕಾರಿ ಪ್ರೌಢಶಾಲೆಗಳ ಅವಶ್ಯಕತೆ ಇರುವುದು ಹಾಗೂ ಮಂಜೂರಾತಿ ಪ್ರಸ್ತಾವನೆಯು ಸರ್ಕಾರದ ಗಮನಕ್ಕೆ ಬಂದಿದೆಯೇ;

(ಆ) ಹಾಗಿದ್ದಲ್ಲಿ, ಮಂಜೂರಾತಿ ನೀಡದೇ ಇರಲು ಕಾರಣಗಳೇನು;

(ಇ) ಯಾವಾಗ ಪ್ರೌಢಶಾಲೆಗಳಿಗೆ ಮಂಜೂರಾತಿ ನೀಡಲಾಗುವುದು?

ಶ್ರೀ ವಿಶ್ವೇಶ್ವರ ಹೆಗಡೆ ಕಾಗೇರಿ: ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಸಚಿವರು.

(ಅ) ಬಂದಿದೆ.

2008–09 ನೇ ಸಾಲಿನಲ್ಲಿ ಭದ್ರಾವತಿ ತಾಲ್ಲೂಕಿನಲ್ಲಿ ದೊಡ್ಡೇರಿ, ಕಂಬದಾಳ್, ಕೂಡ್ಲಿಗೆರೆ ಮತ್ತು ದೊಣಬಗಟ್ಟ ಗ್ರಾಮಗಳಲ್ಲಿ ಹೊಸ ಶಾಲೆ ಪ್ರಾರಂಭಿಸಲು ಪ್ರಸ್ತಾವನೆಗಳು ಬಂದಿರುತ್ತವೆ.

(ಆ) ರಾಷ್ಟ್ರೀಯ ಮಾಧ್ಯಮಿಕ ಶಿಕ್ಷಣ ಅಭಿಯಾನ ಕಾರ್ಯಕ್ರಮದಲ್ಲಿ ಶಾಲೆಗಳನ್ನು ಉನ್ನತೀಕರಿಸಲು ಈ ಕೆಳಗಿನ ನಿಯಮಗಳನ್ನು ಅನುಸರಿಸಲಾಗುತ್ತಿದೆ. 5 ಕಿ.ಮೀ ವ್ಯಾಪ್ತಿಯೊಳಗೆ ಸರ್ಕಾರಿ ಹಾಗೂ ಅನುದಾನಿತ ಪ್ರೌಢಶಾಲೆಗಳು ಇರಬಾರದು. 8ನೇ ತರಗತಿ ಹೊಂದಿರುವ ಹಿರಿಯ ಪ್ರಾಥಮಿಕ ಶಾಲೆಗಳನ್ನು 9 ನೇ ತರಗತಿಯೊಂದಿಗೆ ಉನ್ನತೀಕರಿಸಲು ಅವಕಾಶವಿರುತ್ತದೆ.